**Bangalore**
**Regional News**
**21.01.2025 / 2.30 P.M.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಬೆಳಗಾವಿಯ ಸುವರ್ಣ ಸೌಧದ ಆವರಣದಲ್ಲಿಂದು ಮಹಾತ್ಮಾ ಗಾಂಧೀಜಿ ಪ್ರತಿಮೆ ಅನಾವರಣಗೊಳಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ

2. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ "ಗಾಂಧಿ ಭಾರತ ಮರು ನಿರ್ಮಾಣ ಪುಸ್ತಕ ಲೋಕಾರ್ಪಣೆ

3. ಅಡಿಕೆಗೆ ತಗಲುವ ರೋಗಗಳ ಪರಿಹಾರಕ್ಕೆ ಮುಂದಿನ ಬಜೆಟ್‌ನಲ್ಲಿ ೬೭ ಕೋಟಿ ರೂಪಾಯಿ ಘೋಷಣೆ - ಕೇಂದ್ರ ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್

4. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ - ವಿಧಾನಸಭೆ ವಿರೋಧ ಪಕ್ಷ ನಾಯಕ ಆರ್. ಅಶೋಕ ಆರೋಪ

<><><><>

ಬೆಳಗಾವಿಯ ಸುವರ್ಣ ಸೌಧದ ಆವರಣದಲ್ಲಿಂದು ಮಹಾತ್ಮಾಗಾಂಧೀಜಿ ಪ್ರತಿಮೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಂಸದೆ ಪ್ರಿಯಾಂಕಾ ಗಾಂಧಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಇದೇ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಮೊದಲ ಅಧ್ಯಕ್ಷರಾಗಿ ಗಾಂಧೀಜಿ ಅಧಿಕಾರ ಸ್ವೀಕರಿಸಿದ್ದು, ಹಾಗೂ ಮೊದಲ ಅಧಿವೇಶನ ಬೆಳಗಾವಿಯಲ್ಲಿ ನಡೆದಿದ್ದು, ಅವಿಸ್ಮರಣೀಯ ಎಂದು ಹೇಳಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮಾಜದಲ್ಲಿ ಸಮಾನತೆ ಇದ್ದು, ಸೌಹಾರ್ದತೆ ನೆಲೆಸಬೇಕು. ಅಸ್ಪೃಶ್ಯತೆ ಹೋಗಲಾಡಿಸಲು, ಮಹಿಳೆಯರಿಗೆ ಸ್ವಾತಂತ್ರ್ಯ ಹಾಗೂ ಅವರ ಹಕ್ಕುಗಳ ರಕ್ಷಣೆಯಾಗಬೇಕೆಂದು ಗಾಂಧೀಜಿ ಪ್ರತಿಪಾದಿಸಿದ್ದರು ಎಂದು ಹೇಳಿದರು. ಗಾಂಧೀಜಿಯವರ ತತ್ವಾದರ್ಶಗಳನ್ನು ಪುನಸ್ಥಾಪಿಸಲು ವರ್ಷವಿಡೀ ಅಭಿಯಾನ ನಡೆಸಲಾಗುವುದು. ಈ ನಿಟ್ಟಿನಲ್ಲಿ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶ ಹಮ್ಮಿಕೊಳ್ಳಲಾಗಿದೆ. ಗಾಂಧೀಜಿ ಹಾಗೂ ಅವರ ವಿಚಾರಧಾರೆಗಳು ಇಡೀ ವಿಶ್ವಕ್ಕೆ ಇಂದಿಗೂ

ಪ್ರಸ್ತುತ ಎಂದರು. ಮಹಿಳೆಯರಿಗೆ ರಕ್ಷಣೆ ದೊರೆಯಬೇಕು, ಸಮಾಜದಲ್ಲಿ ಸಮಾಜಘಾತಕ ಶಕ್ತಿಗಳ ವಿರುದ್ಧ ಗಂಭೀರ ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

<><><>

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ "ಗಾಂಧಿ ಭಾರತ ಮರು ನಿರ್ಮಾಣ" ಹಾಗೂ **Reclaiming Gandhi Bharath** ಕನ್ನಡ ಹಾಗೂ ಆಂಗ್ಲ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಬಿಡುಗಡೆ ಮಾಡಿದರು. ಬೆಳಗಾವಿಯ ಸುವರ್ಣ ಸೌಧದ ಆವರಣದಲ್ಲಿ ಸ್ಥಾಪಿಸಿರುವ ಬೃಹತ್ ಗಾಂಧಿ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಈ ಕೃತಿಗಳನ್ನು ಲೋಕಾರ್ಪಣೆ ಮಾಡಲಾಯಿತು. ೧೯೨೪ ರಲ್ಲಿ ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸಂದರ್ಭದಲ್ಲಿ ಕೈಗೊಂಡ ನಿರ್ಣಯಗಳು, ಅಧ್ಯಕ್ಷೀಯ ಭಾಷಣ ಮತ್ತಿತರ ಮಾಹಿತಿಗಳು ಹಾಗೂ ಅಪರೂಪದ ಛಾಯಾಚಿತ್ರಗಳನ್ನು ಈ ಪುಸಕ್ತಗಳು ಒಳಗೊಂಡಿದೆ. ಅಲ್ಲದೇ, ಕೊಲ್ಕತ್ತಾ ಒಪ್ಪಂದ ಮತ್ತು ನೇಯ್ಗೆಯ ಮತಾಧಿಕಾರ, ಸರೋಜಿನಿ ನಾಯ್ಡು ಅವರ ವಿದೇಶಾಂಗ ಸೇವೆ, ಅಕಾಲಿಗಳಿಗೆ ಅಭಿನಂದನೆ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳು, ಬರ್ಮಾದ ಜನರಿಗೆ ಸಹಾನುಭೂತಿ, ಕೋಹತ್ ಹಾಗೂ ಕಲಬುರ್ಗಿ ಗಲಭೆಗಳು, ಅಸ್ಪೃಶ್ಯತೆ ನಿವಾರಣೆ, ಅಧಿವೇಶನದ ಲೆಕ್ಕಪರಿಶೋಧನೆ ಸೇರಿದಂತೆ ಐತಿಹಾಸಿಕ ಮಾಹಿತಿಗಳು ಹಾಗೂ ಛಾಯಾಚಿತ್ರಗಳನ್ನು ಈ ಪುಸ್ತಕಗಳು ಒಳಗೊಂಡಿವೆ.

<><><>

ಮಹಾತ್ಮ ಗಾಂಧೀಜಿ ಹಾಗೂ ಕಾಂಗ್ರೆಸ್ ನೀಡಿದ ಅಹಿಂಸೆಯ ಆದರ್ಶವನ್ನು ವಿಶ್ವ ಒಪ್ಪಿದೆ. ಇದನ್ನು ಉಳಿಸಿಕೊಂಡು, ಮುಂದಿನ ಪೀಳಿಗೆಗೆ ತಿಳಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಾಂಧೀಜಿ ಅವರ ತತ್ವ ಆದರ್ಶಗಳು, ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಉಳಿಸಬೇಕು. ಗಾಂಧೀಜಿ ಅವರು ನಮ್ಮೊಂದಿಗೆ ಇಲ್ಲದಿದ್ದರೂ, ತತ್ವ ಸಿದ್ಧಾಂತಗಳ ಮೂಲಕ ಸದಾ ಜೀವಂತವಾಗಿರುತ್ತಾರೆ. ಗಾಂಧೀಜಿ ಅವರ ಪರಂಪರೆಯನ್ನು ನಾವು ಮುಂದುವರಿಸಿಕೊಂಡು ಹೋಗಬೇಕು. ಅದಕ್ಕಾಗಿ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

<><><>

ರಾಜ್ಯದ ಕೊಬ್ಬರಿ ಮತ್ತು ಅಡಿಕೆ ಬೆಳೆಗಾರರು ಸೇರಿದಂತೆ ಕೃಷಿ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಕೇಂದ್ರ ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಅವರೊಂದಿಗೆ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮಹತ್ವದ ಮಾತುಕತೆ ನವದೆಹಲಿಯಲ್ಲಿ ನಡೆಸಿದರು. ಅಡಿಕೆಗೆ ತಗಲುವ ರೋಗಗಳ ಪರಿಹಾರಕ್ಕೆ ಮುಂದಿನ ಅಯವ್ಯಯದಲ್ಲಿ ೬೭ ಕೋಟಿ ರೂಪಾಯಿಗಳನ್ನು ಘೋಷಣೆ ಮಾಡಲಾಗುವುದು ಎಂದು ಇದೇ ವೇಳೆ ಕೇಂದ್ರ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ತಿಳಿಸಿದರು. ಕರ್ನಾಟಕದ ತೆಂಗು ಬೆಳೆಗಾರರು ಎದುರಿಸುತ್ತಿರುವ ಕಠಿಣ ಸವಾಲುಗಳ ಬಗ್ಗೆ ಕೃಷಿ ಸಚಿವರ ಗಮನ ಸೆಳೆದ ಹೆಚ್.ಡಿ.ಕುಮಾರಸ್ವಾಮಿ, ತೆಂಗು ಬೆಳೆಗಾರರ ಸಂಕಷ್ಟ ಪರಿಹಾರ ಮಾಡುವ ನಿಟ್ಟಿನಲ್ಲಿ ದೊಡ್ಡ ಉಪಕ್ರಮ ಕೈಗೊಳ್ಳಬೇಕಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ತೆಂಗು ಬೆಳೆಗಾರರ ಸಮಾವೇಶ ನಡೆಸಿ, ಅವರ ಸಂಕಷ್ಟಗಳಿಗೆ ಪರಿಹಾರ ಒದಗಿಸಬೇಕು ಎಂದು ಮನವಿ ಮಾಡಿದರು. ದುಬಾರಿ ಸಾಗಾಣಿಕೆ ವೆಚ್ಚವೇ ತೆಂಗು ಬೆಳೆಗಾರರಿಗೆ ದೊಡ್ಡ ಸಮಸ್ಯೆ ಆಗಿದೆ. ಅವರಿಗೆ ನ್ಯಾಯಯುತ ಬೆಲೆ ಧಕ್ಕಿಸಿಕೊಡುವುದರ ಜೊತೆಗೆ ಸಾಗಾಣಿಕೆ ವ್ಯವಸ್ಥೆಯನ್ನು ರೈತರ ಕೈಗೆಟುಕುವಂತೆ ಮಾಡುವುದು ಅತ್ಯಗತ್ಯವಾಗಿದೆ. ಇದಕ್ಕೆ ಕೃಷಿ ಸಚಿವಾಲಯದ ನೆರವು ಅಗತ್ಯವಿದೆ ಎಂದು ಅವರು ಕೋರಿದರು.

<><><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯ ಗ್ಯಾರೆಂಟಿ ಎಲ್ಲಿದೆ ಎಂದು ಪ್ರಶ್ನಿಸಿದ್ದಾರೆ. ಬೀದರ್, ಮಂಗಳೂರು, ಚಿತ್ರದುರ್ಗ, ಮೈಸೂರು, ಆನೇಕಲ್ ಮತ್ತು ಹುಬ್ಬಳ್ಳಿಯಲ್ಲಿ ಕಳೆದ ೫ ದಿನಗಳ ಅಂತರದಲ್ಲಿ ಒಟ್ಟು ೬ ದರೋಡೆ, ಸುಲಿಗೆ, ಕಳ್ಳತನ ಪ್ರಕರಣಗಳು ಬೆಳಕಿಗೆ ಬಂದಿವೆ. ಜನಸಾಮಾನ್ಯರು ಭಯಭೀತರಾಗಿ ದಿನಕಳೆಯುವ ದುಸ್ಥಿತಿ ಉದ್ಭವಿಸಿದೆ ಎಂದು ದೂರಿದ್ದಾರೆ. ರಾಜ್ಯದಲ್ಲಿ ಹೆಣ್ಣುಮಕ್ಕಳು ಸುರಕ್ಷಿತವಾಗಿ ಓಡಾಡುವ ವಾತಾವರಣ ಇಲ್ಲದಂತಾಗಿದೆ ಎಂದು ಆರ್. ಅಶೋಕ ಆರೋಪಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ ರಾಜ್ಯದ ೧೨ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಕುಟುಂಬದವರಿಗೆ ದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಕೇಂದ್ರ ಪಂಚಾಯತ್‌ರಾಜ್ ಸಚಿವಾಲಯ ವಿಶೇಷ ಆಹ್ವಾನ ನೀಡಿದೆ.

<><><>

ಬದುಕಿನ ಸಾರ್ಥಕತೆಗೆ ಅಗತ್ಯವಾದ ನೀತಿ ಹಾಗೂ ಅರಿವಿನ ಬೆಳಕನ್ನು ತುಂಬುವ, ಮನುಕುಲದ ಆಚಾರ ಸಂಹಿತೆ- 'ಶ್ರೀಸಿದ್ಧಾಂತ ಶಿಖಾಮಣಿ' ಎಂದು ಕಾಶಿ ಜ್ಞಾನ ಪೀಠದ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಹೇಳಿದ್ದಾರೆ. ಉತ್ತರಪ್ರದೇಶದ ಪ್ರಯಾಗರಾಜ್ ತ್ರಿವೇಣಿ ಸಂಗಮದಲ್ಲಿ ಜರುಗುತ್ತಿರುವ ಮಹಾಕುಂಭಮೇಳದ ಅಂಗವಾಗಿ ದಶಾಶ್ವಮೇಧ ಘಾಟ್‌ನಲ್ಲಿರುವ, ಧರ್ಮಪೀಠದ ಶಾಖಾಮಠದಲ್ಲಿ ಆಯೋಜಿಸಲಾದ ಳಳ ದಿನಗಳ ತಪೋನು?ನ ಹಾಗೂ ಧರ್ಮ ಚಿಂತನ ಸಮಾವೇಶ ಉದ್ದೇಶಿಸಿ ಅವರು ಮಾತನಾಡಿದರು. ದ್ವೈತ ಹಾಗೂ ಅದ್ವೈತ ಸಿದ್ಧಾಂತಗಳ ಸಮನ್ವಯ ಸಾರವಾಗಿರುವ 'ಶ್ರೀಸಿದ್ಧಾಂತ ಶಿಖಾಮಣಿ'ಯು ಮನುಕುಲದ ಅಭ್ಯುದಯಕ್ಕೆ ಪೂರಕವಾಗಿದೆ ಎಂದರು.

<><><><>

ಉತ್ತರಕನ್ನಡ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಕುಡಿಯುವ ನೀರಿನ ಅನುಮೋದಿತ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕಾರವಾರದಲ್ಲಿ ನಡೆದ ನಗರ ಸ್ಥಳೀಯ ಸಂಸ್ಥೆಗಳ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿನ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಮೋದಿತ ಕ್ರಿಯಾ ಯೋಜನೆಗಳ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯನ್ನು ವಿಳಂಬ ಮಾಡುತ್ತಿರುವ ಬಗ್ಗೆ ಅಸಮಾಧಾನ ಜಿಲ್ಲಾಧಿಕಾರಿ, ಅನುಮೋದನೆ ನೀಡಿದ ನಂತರವು ವಿಳಂಬ ಧೋರಣೆ ತೋರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳುವ ಎಚ್ಚರಿಕೆ ನೀಡಿದರು. ಕಾಮಗಾರಿಗಳು ಪೂರ್ಣಗೊಂಡ ಕೂಡಲೇ ಗುತ್ತಿಗೆದಾರರಿಗೆ ಹಣ ಪಾವತಿ ಮಾಡಬೇಕು. ನಗರ ಸ್ಥಳೀಯ ಸಂಸ್ಥೆಗಳು ಕಾಮಗಾರಿ ಪೂರ್ಣಗೊಂಡರೂ ಹಣ ಪಾವತಿ ಮಾಡದೇ ಇರುವುದರಿಂದ ಆರ್ಥಿಕ ಪ್ರಗತಿ ಕುಂಠಿತವಾಗಿದೆ. ಪೂರ್ಣಗೊಂಡ ಕಾಮಗಾರಿಗಳಿಗೆ ಸಕಾಲದಲ್ಲಿ ಹಣ ಪಾವತಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

<><><><>

ಸಕಾಲ ಯೋಜನೆಯಡಿ ಸ್ವೀಕರಿಸಲಾದ ಅರ್ಜಿಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸಕಾಲ ಯೋಜನೆಯ ಜಿಲ್ಲಾ ಮಟ್ಟದ ವಿವಿಧ ಇಲಾಖಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಕಾಲದಲ್ಲಿ ಅರ್ಜಿ ಸ್ವೀಕರಿಸುವಾಗ ಅರ್ಜಿಯ ಜೊತೆಗೆ ನಿಗದಿಪಡಿಸಿದ ದಾಖಲಾತಿಗಳನ್ನು ಸ್ವೀಕರಿಸಬೇಕು. ಸಕಾಲ ಯೋಜನೆಯಡಿ ಇಲಾಖೆಗಳಿಗೆ ನಿಗದಿಪಡಿಸಿದ ಯೋಜನೆಗಳಲ್ಲಿ

ಕಡ್ಡಾಯವಾಗಿ ಅರ್ಜಿಗಳನ್ನು ಸ್ವೀಕರಿಸಬೇಕು. ಕೆಲವು ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಪರಿಹಾರ ಕಂಡುಕೊಂಡು, ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಬೇಕು ಎಂದು ನಿರ್ದೇಶಿಸಿದರು.

<><><>

ಕೃಷಿ ಅಧ್ಯಯನ ನಡೆಸಲು ವಿದ್ಯಾರ್ಥಿನಿಯರು ಆಸಕ್ತಿಯಿಂದ ಬಂದಿರುವುದು ಹೊಸ ಬೆಳವಣಿಗೆಯಾಗಿದೆ. ಸಂಕಷ್ಟದಲ್ಲಿರುವ ರೈತರಿಗೆ ಕಡಿಮೆ ಖರ್ಚಿನಲ್ಲಿ ಅಧಿಕ ಬೆಲೆ ಬರುವ ತಳಿಗಳನ್ನು ಹಾಗೂ ಕೃಷಿಯ ವಿವಿಧ ಮಾರ್ಗೋಪಾಯಗಳನ್ನು ಕೃಷಿ ಪದವೀಧರರು ಕಂಡು ಹಿಡಿದು, ರೈತರ ನೆಮ್ಮದಿ ಜೀವನಕ್ಕೆ ನಾಂದಿ ಹಾಡಬೇಕು ಎಂದು ಹೇಳಿದರು. ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಅಧ್ಯಯನದ ಕಡೆ ಗಮನಹರಿಸಬೇಕು. ಆರೋಗ್ಯ ಕಾಪಾಡಿಕೊಳ್ಳಬೇಕು.

<><><>

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಒಲಿಂಪಿಕ್ಸ್ ಅಸೋಸಿಯೇಶನ್ ಸಹಯೋಗದಲ್ಲಿ ಉಡುಪಿಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಮಹಿಳೆಯರ ೬೫ ರಿಂದ ೭೦ ಕಿಲೋಗ್ರಾಂ ವಿಭಾಗದ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಶಿವಮೊಗ್ಗದ ನಿವೇದಿತಾ ಆರ್. ಪ್ರಥಮ ಸ್ಥಾನ ಪಡೆದು, ಚಿನ್ನದ ಪದಕ ಜಯಿಸಿದ್ದಾರೆ. ಪುರುಷರ ೬೦ ರಿಂದ ೬೫ ಕಿಲೋಗ್ರಾಂ ವಿಭಾಗದ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಸಮೃದ್ಧ್ ಅವರು ಕಂಚಿನ ಪದಕ ಗೆದ್ದಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>